All India Radio: Bangalore
Regional Bulletin In Kannada
02.12.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಶಿವಕುಮಾರ್ ಮತ್ತು ತಮ್ಮ ನಡುವೆ ಯಾವುದೇ ಭಿನ್ನಾಭಿಪ್ರಾಯವಿಲ್ಲ : ಉಪಹಾರ ಕೂಟದ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
- ಕಾಂಗ್ರೆಸ್ ನಾಯಕರ ಉಪಹಾರ ಕೂಟಕ್ಕೆ ಸಂಸದ ಬಸವರಾಜ ಬೊಮ್ಮಾಯಿ ಟೀಕೆ
- ಪೋಕ್ಸೊ ಪ್ರಕರಣ : ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿರುದ್ಧದ ವಿಚಾರಣಾ ಪ್ರಕ್ರಿಯೆಗೆ ಸರ್ವೋಚ್ಚ ನ್ಯಾಯಾಲಯ ತಡೆ
- ನಾಡಿನೆಲ್ಲೆಡೆ ಇಂದು ಹನುಮ ಜಯಂತಿ : ಕೊಪ್ಪಳದ ಅಂಜನಾದ್ರಿ ಬೆಟ್ಟದಲ್ಲಿ ಭಕ್ತರಿಂದ ಹನುಮ ಮಾಲೆ ವಿಸರ್ಜನೆ

<><><><>

ಮುಖ್ಯಮಂತ್ರಿ ಹುದ್ದೆ ವಿಚಾರಕ್ಕೆ ಸಂಬಂಧಿಸಿದಂತೆ ಉಂಟಾಗಿರುವ ಗೊಂದಲ ನಿವಾರಣೆ ಸಂಬಂಧ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಉಪಹಾರಕೂಟ ನಡೆಸಿದರು. ಸದಾಶಿವನಗರದಲ್ಲಿನ ಡಿ.ಕೆ. ಶಿವಕುಮಾರ್ ನಿವಾಸಕ್ಕೆ ಆಗಮಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಆತ್ಮೀಯವಾಗಿ ಸ್ವಾಗತಿಸಿದರು. ಉಭಯ ನಾಯಕರು ಉಪಹಾರ ಕೂಟ ನಡೆಸುವ ಮೂಲಕ ಕಾಂಗ್ರೆಸ್ ಪಕ್ಷದಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ ಎಂಬ ಸಂದೇಶ ರವಾನಿಸಿದರು. ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ನಮ್ಮಿಬ್ಬರ ಮಧ್ಯೆ ಯಾವುದೇ ಭಿನ್ನಾಭಿಪ್ರಾಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಹೈಕಮಾಂಡ್ ತೀರ್ಮಾನದಂತೆ ಇಬ್ಬರು ನಡೆದುಕೊಳ್ಳುವುದಾಗಿ ಪುನರುಚ್ಚರಿಸಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ

ಇದೇ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಪಕ್ಷದ ಅಭಿವೃದ್ಧಿ ಹಾಗೂ ಅಧಿವೇಶನದ ವಿಷಯವನ್ನು ಚರ್ಚೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ನಮ್ಮಿಬ್ಬರ ಮಧ್ಯೆ

ಯಾವುದೇ ಗೊಂದಲವಿಲ್ಲ. ಇದೇ ಎರಡು ದೆಹಲಿಗೆ ತೆರಳಲು ಚಿಂತನೆ ನಡೆಸಿರುವುದಾಗಿ ತಿಳಿಸಿದ್ದಾರೆ. ಹೈಕಮಾಂಡ್ ಸೂಚನೆಯಂತೆ ಅಧಿಕಾರ ಹಸ್ತಾಂತರ ಗೊಂದಲ ನಿವಾರಿಸಲು ಕಳೆದ ಶನಿವಾರ ಡಿ.ಕೆ. ಶಿವಕುಮಾರ್ ಅವರು, ಸಿದ್ದರಾಮಯ್ಯ ಅವರ ನಿವಾಸಕ್ಕೆ ತೆರಳಿ ಉಪಹಾರ ಸೇವಿಸಿದ್ದರು. ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಿ.ಕೆ. ಶಿವಕುಮಾರ್ ಅವರ ನಿವಾಸಕ್ಕೆ ತೆರಳಿ ಸುಮಾರು ೧ ಗಂಟೆಗಳ ಕಾಲ ಚರ್ಚೆ ನಡೆಸಿದರು.

<><><><>

ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ನಡುವಿನ ಉಪಹಾರ ಕೂಟವನ್ನು ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಟೀಕಿಸಿದ್ದಾರೆ. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲವೇ ದಿನಗಳಲ್ಲಿ ಕಾಂಗ್ರೆಸ್ ಪರಿಸ್ಥಿತಿ ಏನು ಎಂಬುದು ಹೊರ ಬೀಳಲಿದೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ಕುರ್ಚಿ ನಾಟಕ ನಿಲ್ಲಬೇಕು ಎಂಬುದು ಜನರ ಒತ್ತಾಸೆಯಾಗಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಕಾಂಗ್ರೆಸ್ ಹೈಕಮಾಂಡ್ ಯಾರು ಎಂದು ಪ್ರಶ್ನಿಸಿದ್ದಾರೆ.

<><><><>

ಪೋಕ್ಸೋ ಪ್ರಕರಣದ ಮೊದಲ ಆರೋಪಿಯಾಗಿರುವ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ವಿರುದ್ಧ ಬೆಂಗಳೂರಿನ ಸೆಷನ್ಸ್ ನ್ಯಾಯಾಲಯ ಹೊರಿಡಿಸಿದ್ದ ಸಮನ್ಸ್ ಹಾಗೂ ವಿಚಾರಣಾ ಪ್ರಕ್ರಿಯೆಗೆ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಪೀಠ ತಡೆಯಾಜ್ಞೆ ನೀಡಿದೆ. ಸಿಐಡಿ ಮತ್ತು ಸಂತ್ರಸ್ತ ಬಾಲಕಿಗೆ ನ್ಯಾಯಾಲಯ ನೋಟಿಸ್ ಜಾರಿ ಮಾಡಿದೆ. ಡಿಸೆಂಬರ್ ೨ರಂದು ಕೋರ್ಟ್‌ಗೆ ಖುದ್ದು ಹಾಜರಾಗುವಂತೆ ಕೆಳ ನ್ಯಾಯಾಲಯ ಆದೇಶ ನೀಡಿತ್ತು. ಪ್ರಕರಣ ರದ್ದುಪಡಿಸಲು ರಾಜ್ಯ ಹೈಕೋರ್ಟ್ ನಿರಾಕರಿಸಿತ್ತು. ಈ ಹಿನ್ನೆಲೆಯಲ್ಲಿ ಯಡಿಯೂರಪ್ಪ ಅವರು, ಸುಪ್ರೀಂಕೋರ್ಟ್ ಮೊರೆ ಹೋಗಿದ್ದರು.

<><><><>

ರಾಜ್ಯದ ೫ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಕಳೆದ ೧೧ ತಿಂಗಳಲ್ಲಿ ರಸ್ತೆಗುಂಡಿಗಳಿಂದ ೫೫೮ ಸಾವು ಸಂಭವಿಸಿರುವ ಬಗ್ಗೆ ಆತಂಕಕಾರಿ ಅಂಶ ಬೆಳಕಿಗೆ ಬಂದಿದೆ. ಇದು ಸರ್ಕಾರದ ವೈಫಲ್ಯಕ್ಕೆ ಸಾಕ್ಷಿಯಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು,

ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ಆರಂಭಿಸುವ ಬಗ್ಗೆ ಆಶ್ವಾಸನೆ ನೀಡಿ, ೧೦ ದಿನಗಳು ಕಳೆದರೂ ರಾಜ್ಯದಲ್ಲಿ ಒಂದೇ ಒಂದು ಖರೀದಿ ಕೇಂದ್ರ ಆರಂಭವಾಗಿಲ್ಲ ಎಂದು ದೂರಿದ್ದಾರೆ.

<><><><>

ನಾಡಿನೆಲ್ಲೆಡೆ ಇಂದು ಹನುಮ ಜಯಂತಿಯನ್ನು ಶ್ರದ್ಧಾಭಕ್ತಿಗಳಿಂದ ಆಚರಿಸಲಾಗುತ್ತಿದೆ. ಹನುಮ ಉದಯಿಸಿದ ನಾಡು ಎಂದು ಪ್ರಸಿದ್ಧವಾಗಿರುವ ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಆನೆಗೊಂದಿಯ ಅಂಜನಾದ್ರಿ ಬೆಟ್ಟದಲ್ಲಿ ಹನುಮ ಮಾಲೆ ವಿಸರ್ಜನೆಗೆ ಕ್ಷಣಗಣನೆ ಆರಂಭವಾಗಿದೆ. ಕೊಪ್ಪಳ ಜಿಲ್ಲಾಡಳಿತ ಸಕಲ ಸಿದ್ಧತೆಗಳನ್ನ ಮಾಡಿಕೊಂಡಿದ್ದು ಎಲ್ಲಾ ರೀತಿಯ ತಯಾರಿ ನಡೆಸಿದೆ. ಈ ಬಾರಿ ಹನುಮ ಮಾಲೆ ವಿಸರ್ಜನೆ ಕಾರ್ಯಕ್ರಮವನ್ನು ಪ್ಲಾಸ್ಟಿಕ್ ಮುಕ್ತ ಹಾಗೂ ಪರಿಸರ ಸ್ನೇಹಿ ಕಾರ್ಯಕ್ರಮವನ್ನು ಮಾಡಲಾಗುವುದು ಎಂದು ಕೊಪ್ಪಳ ಜಿಲ್ಲಾಧಿಕಾರಿ ಡಾಕ್ಟರ್ ಸುರೇಶ್ ಬಿ ಇಟ್ನಾಳ್ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡ ಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ, ನೆಲಮಂಗಲ ತಾಲ್ಲೂಕಿನ ವಿವಿಧ ಆಂಜನೇಯ ಸ್ವಾಮಿ ಹಾಗೂ ಶ್ರೀರಾಮ ದೇವಾಲಯಗಳಲ್ಲಿ  ಇಂದು ರಾಮಭಕ್ತ ಹನುಮ ಜಯಂತಿಯನ್ನು ಶ್ರದ್ಧಾಭಕ್ತಿಗಳಿಂದ ಆಚರಿಸಲಾಗುತ್ತಿದೆ.

<><><><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ದತ್ತ ಜಯಂತಿ ಉತ್ಸವದ ಅಂತಿಮ ಹಂತದ ೩ ದಿನಗಳ ಕಾರ್ಯಕ್ರಮಗಳು ಇಂದಿನಿಂದ ಆರಂಭವಾಗಿದೆ. ಚಿಕ್ಕಮಗಳೂರು ನಗರದಲ್ಲಿ ಇಂದು ನೂರಾರು ಮಹಿಳೆಯರಿಂದ ಸಂಕೀರ್ತನ ಯಾತ್ರೆ ಹಾಗೂ ದತ್ತಪೀಠದಲ್ಲಿ  ಅನುಸೂಯ ದೇವಿ ಪೂಜೆ ಕಾರ್ಯಕ್ರಮ ನಡೆಯಿತು. ನಾಳೆ ಚಿಕ್ಕಮಗಳೂರು ನಗರದಲ್ಲಿ ಮಧ್ಯಾಹ್ನ ೩ ಗಂಟೆಯಿಂದ ೬ ಗಂಟೆವರೆಗೆ ಶೋಭಾ ಯಾತ್ರೆ ನಡೆಯಲಿದೆ. ಯಾವುದೇ ಅಹಿತಕರ ಘಟನೆ ನಡೆಯದಂತೆ ಜಿಲ್ಲಾಡಳಿತ ಪೊಲೀಸ್ ಬಂದೋಬಸ್ತ್ ಮಾಡಿದೆ. ಸುಮಾರು ೫ ಸಾವಿರಕ್ಕೂ ಅಧಿಕ ಪೊಲೀಸ್ ಸಿಬ್ಬಂದಿಗಳನ್ನು ಕರ್ತವ್ಯಕಾಗಿ ನಿಯೋಜಿಸಲಾಗಿದೆ. ಚೆಕ್ ಪೊಸ್ಟ್ ಹಾಗೂ ಸೂಕ್ಷ್ಮ ಪ್ರದೇಶಗಳಲ್ಲಿ ದಿನದ ೨೪ ಗಂಟೆ ಪೊಲೀಸ್ ಕಣ್ಗಾವಲು ಇರಿಸಲಾಗಿದೆ. ಜಿಲ್ಲೆಯಾದ್ಯಂತ ಮುನ್ನೆಚ್ಚರಿಕಾ ಕ್ರಮವಾಗಿ ಪೊಲೀಸ್ ಭದ್ರತೆ ಹೆಚ್ಚಿಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮಾಟೆ ತಿಳಿಸಿದ್ದಾರೆ.

<><><><>

ಚಿಕ್ಕಪೇಟೆ ಮಾಜಿ ಶಾಸಕ ಆರ್.ವಿ.ದೇವರಾಜ್ ಹೃದಯಾಘಾತದಿಂದ ನಿಧನ ಹೊಂದಿದ್ದಾರೆ. ನಿನ್ನೆ ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ತೆರಳುತ್ತಿದ್ದಾಗ ಅವರಿಗೆ ಹೃದಯಾಘಾತವಾಗಿತ್ತು. ಕೂಡಲೇ ಅವರನ್ನು ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಬಳಿಕ ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಜಯದೇವ ಆಸ್ಪತ್ರೆಗೆ ರವಾನಿಸಿ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಆರ್.ವಿ. ದೇವರಾಜ್ ಇಹಲೋಕ ತ್ಯಜಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದಿದ್ದು, ಕುಟುಂಬಸ್ಥರಿಗೆ ಸಾಂತ್ವಾನ ಹೇಳಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವ ಜಮೀರ್ ಅಹಮ್ಮದ್ ಸೇರಿದಂತೆ ಕಾಂಗ್ರೆಸ್ ನಾಯಕರು ಸಂತಾಪ ಸೂಚಿಸಿದ್ದಾರೆ.

<><><><>

ಹಾವೇರಿ ಜಿಲ್ಲೆಯಲ್ಲಿ ೨೦೦೨ರಿಂದ ೨೦೨೫ರವರೆಗೆ ೯ ಸಾವಿರ ೬೪೫ ಎಚ್‌ಐವಿ ಸೋಂಕಿತರನ್ನು ಪತ್ತೆ ಮಾಡಲಾಗಿದ್ದು ಜಿಲ್ಲಾಸ್ಪತ್ರೆಯಲ್ಲಿರುವ ಎಆರ್‌ಟಿ ಕೇಂದ್ರದಲ್ಲಿ ೭ ಸಾವಿರ ೬೭೧ ಸೋಂಕಿತರಿಗೆ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ನೀಲೇಶ ಮಾಹಿತಿ ನೀಡಿದ್ದಾರೆ. ೨೦೦೨ರಿಂದ ೨೦೨೫ರ ಅಕ್ಟೋಬರ್‌ವರೆಗೆ ೮ ಲಕ್ಷ ೮೮ ಸಾವಿರ ೫೪೮ ಸಾಮಾನ್ಯ ಜನರನ್ನು ಪರೀಕ್ಷೆಗೆ ಒಳಪಡಿಸಲಾಗಿದೆ. ಈ ಪೈಕಿ ೯ ಸಾವಿರ ೬೪೫ ಎಚ್‌ಐವಿ ಸೋಂಕಿತರು ಇರುವುದು ಗೊತ್ತಾಗಿದೆ. ೬ ಲಕ್ಷ ೩೮ ಸಾವಿರ ೫೯೮ ಗರ್ಭಿಣಿಯರನ್ನು ಪರೀಕ್ಷೆಗೆ ಒಳಪಡಿಸಲಾಗಿದ್ದು ಈ ಪೈಕಿ ೬೮೮ ಗರ್ಭಿಣಿಯರಿಗೆ ಎಚ್‌ಐವಿ ಸೋಂಕು ಇರುವುದು ಪತ್ತೆಯಾಗಿದೆ ಎಂದು ತಿಳಿಸಿದ್ದಾರೆ.

<><><><>

ಮಂಡ್ಯ ಜಿಲ್ಲೆಯಲ್ಲಿ ಚಿರತೆಗಳ ಹಾವಳಿ ಹೆಚ್ಚುತ್ತಿರುವುದರಿಂದ ಬೇಸಾಯಕ್ಕಾಗಿ ರೈತರ ಜಮೀನುಗಳಿಗೆ ಹಗಲು ಸಮಯದಲ್ಲಿ ವಿದ್ಯುತ್ ಪೂರೈಕೆ ಮಾಡುವಂತೆ ಸೆಸ್ಕಾಂ ಅಧಿಕಾರಿಗಳಿಗೆ ಶಾಸಕ ದರ್ಶನ್‌ಪುಟ್ಟಣ್ಣಯ್ಯ ಸೂಚನೆ ನೀಡಿದ್ದಾರೆ. ಪಾಂಡವಪುರ ತಾಲೂಕಿನ ದೊಡ್ಡಬ್ಯಾಡರಹಳ್ಳಿ ಗ್ರಾಮಪಂಚಾಯಿತಿಯಲ್ಲಿ ನಡೆಯುತ್ತಿರುವ ಸರ್ಕಾರಿ ಸೇವೆ ಮನೆ ಬಾಗಿಲಿಗೆ ಕಾರ್ಯಕ್ರಮದಲ್ಲಿ ರೈತರು ಶಾಸಕರ ಬಳಿ ಮನವಿ ಮಾಡಿದ ಹಿನ್ನೆಲೆಯಲ್ಲಿ ಶಾಸಕ ದರ್ಶನ್ ಪುಟ್ಟಣ್ಣಯ್ಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ರಾತ್ರಿ ಹೊತ್ತು ವಿದ್ಯುತ್ ನೀಡುವುದರಿಂದ ರೈತರು ತಮ್ಮ ಜೀವ ಕೈಯಲ್ಲಿ ಹಿಡಿದು ಜಮೀನಿಗೆ ನೀರು ಹರಿಸಲು ಹೋಗಬೇಕಾಗಿದೆ. ಬದಲಿಗೆ ಹಗಲು

ಹೊತ್ತಿನಲ್ಲೇ ವಿದ್ಯುತ್ ಲಭ್ಯವಾದರೆ, ಚಿರತೆಯ ಭೀತಿಯಿಂದ ಸ್ವಲ್ಪ ನಿರಾಳವಾಗಬಹುದು. ಆದರೆ ಬೆಸ್ಕಾಂ ಅಧಿಕಾರಿಗಳು ಸ್ಪಂದಿಸುತ್ತಿಲ್ಲ ಎಂದು ಗ್ರಾಮಸ್ಥರು ದೂರಿದ್ದಾರೆ.

<><><>

ಕರ್ನಾಟಕ ಭೋವಿ ಅಭಿವೃದ್ಧಿ ನಿಗಮಕ್ಕೆ ಬಜೆಟ್ ನಲ್ಲಿ ೩೦೦ ಕೋಟಿ ರೂಪಾಯಿ ಅನುದಾನ ನೀಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಗಿದೆ ಎಂದು ನಿಗಮದ ಅಧ್ಯಕ್ಷ ಎಂ.ರಾಮಪ್ಪ ತಿಳಿಸಿದ್ದಾರೆ. ದಾವಣಗೆರೆಯಲ್ಲಿ ನಿಗಮದ ಪ್ರಗತಿ ಪರಿಶೀಲನೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಸ್ತುತ ನಿಗಮದಲ್ಲಿ ೧೯೭ ಕೋಟಿ ರೂಪಾಯಿ ಅನುದಾನವಿದೆ. ಆರ್ಥಿಕ ವರ್ಷಾಂತ್ಯದ ವೇಳೆಗೆ ವಿವಿಧ ಯೋಜನೆಗಳ ಮೂಲಕ ಫಲಾನುಭವಿಗಳಿಗೆ ಹಣ ವೆಚ್ಚವಾಗಲಿದೆ ಎಂದು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>